Akashvani : Bangalore
National Bulletins In Kannada
11.10.2025 : 19.35PM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ಕೃಷಿ, ಪಶುಸಂಗೋಪನೆ, ಮತ್ತು ಸಂಬಂಧಿತ ಕ್ಷೇತ್ರದ ೫ ಸಾವಿರದ ೪೫೦ ಕೋಟಿ ರೂಪಾಯಿ ಮೌಲ್ಯದ ಯೋಜನೆ ಉದ್ಘಾಟನೆ
- ಲೋಕಮಾನ್ಯ ಜಯಪ್ರಕಾಶ ನಾರಾಯಣ್ ಅವರ ಪೂರ್ವಜರ ಗ್ರಾಮಕ್ಕೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಭೇಟಿ; ಗೌರವ ನಮನ ಸಲ್ಲಿಕೆ
- ಕರ್ನಾಟಕದಲ್ಲಿ ಸಚಿವ ಸಂಪುಟ ವಿಸ್ತರಣೆ ಇಲ್ಲ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಟೆಸ್ಟ್ ಕ್ರಿಕೆಟ್ : ೫ ವಿಕೆಟ್ ನಷ್ಟಕ್ಕೆ ೫೧೮ ರನ್ ಗಳಿಸಿ ಭಾರತದಿಂದ ಇನ್ನಿಂಗ್ಸ್ ಡಿಕ್ಲೇರ್; ಮೊದಲ ಇನ್ನಿಂಗ್ಸ್ ನ ದಿನದಾಟದಲ್ಲಿಂದು ವೆಸ್ಟ್ ಇಂಡೀಸ್ ೪ ವಿಕೆಟ್ ನಷ್ಟಕ್ಕೆ ೧೪೦ ರನ್

><><><><

ನವದೆಹಲಿಯಲ್ಲಿಂದು ವಿಶೇಷ ಕೃಷಿ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕೃಷಿ ಮತ್ತು ಸಂಬಂಧಿತ ವಲಯಗಳ ವಿವಿಧ ಯೋಜನೆಗಳಿಗೆ ಚಾಲನೆ ನೀಡಿದರು. ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ

ಪ್ರಧಾನಮಂತ್ರಿಯವರು ಎರಡು ಪ್ರಮುಖ ಉಪಕ್ರಮಗಳನ್ನೂ ಅನಾವರಣಗೊಳಿಸಿದರು. ಕೃಷಿ ಇಳುವರಿ ಹೆಚ್ಚಿಸಲು, ಬೆಳೆ ವೈವಿಧ್ಯೀಕರಣ ಮತ್ತು ಸುಸ್ಥಿರ ಕೃಷಿ ಅಭ್ಯಾಸಗಳಿಗಾಗಿ ಅಂದಾಜು ೨೪ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಪಿಎಂ ಧನ ಧಾನ್ಯ ಕೃಷಿ ಯೋಜನೆ ಮತ್ತು ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರ ಭಾರತ ಯೋಜನೆಗಳನ್ನು ಆರಂಭಿಸಲಾಗಿದೆ. ಆಯ್ದ ೧೦೦ ನಗರಗಳಲ್ಲಿ ಅಲ್ಪಾವಧಿ ಮತ್ತು ದೀರ್ಘಾವಧಿ ಸಾಲ ಸೌಲಭ್ಯ ನೀಡುವ ಉದ್ದೇಶವಿದೆ. ದ್ವಿದಳ ಧಾನ್ಯಗಳ ಇಳುವರಿ ಪ್ರಮಾಣ ಸುಧಾರಿಸಲು, ದ್ವಿದಳ ಧಾನ್ಯಗಳ ಕೃಷಿ ಭೂಮಿ ವಿಸ್ತರಣೆ ಹಾಗೂ ಖರೀದಿ, ಸಂಗ್ರಹಣೆ, ಸಂಸ್ಕರಣೆಯ ಮೌಲ್ಯ ಸರಪಳಿಯನ್ನು ಬಲಪಡಿಸಲು ದ್ವಿದಳ ಧಾನ್ಯಗಳಲ್ಲಿ ಸ್ವಾವಲಂಬನೆ ಉಪಕ್ರಮವನ್ನು ೧೧ ಸಾವಿರದ ೪೪೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರಾರಂಭಿಸಲಾಗಿದೆ. ಇದೇ ವೇಳೆ, ಪ್ರಧಾನಮಂತ್ರಿಯವರು ಕೃಷಿ, ಪಶುಸಂಗೋಪನೆ, ಮೀನುಗಾರಿಕೆ ಮತ್ತು ಆಹಾರ ಸಂಸ್ಕರಣಾ ಕ್ಷೇತ್ರಗಳ ೫,೪೫೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳನ್ನು ಉದ್ಘಾಟಿಸಿ ರಾಷ್ಟ್ರಕ್ಕೆ ಸಮರ್ಪಿಸಿದರು ಮತ್ತು ಸುಮಾರು ೮೧೫ ಕೋಟಿ ರೂಪಾಯಿಗಳ ಹೆಚ್ಚುವರಿ ಯೋಜನೆಗಳಿಗೆ ಅಡಿಪಾಯ ಹಾಕಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ಎರಡು ಪ್ರಮುಖ ಉಪಕ್ರಮಗಳು ದೇಶದ ಲಕ್ಷಾಂತರ ರೈತರ ಭವಿಷ್ಯವನ್ನು ಪರಿವರ್ತಿಸಲಿವೆ ಎಂದರು. ೨೧ ನೇ ಶತಮಾನದ ಭಾರತವು ತ್ವರಿತ ಅಭಿವೃದ್ಧಿ ಸಾಧಿಸಲು, ದೇಶದ ಕೃಷಿ ವ್ಯವಸ್ಥೆಯಲ್ಲಿ ಸುಧಾರಣೆಗಳು ಅತ್ಯಗತ್ಯವಾಗಿದ್ದು, ಇದನ್ನು ೨೦೧೪ ರಲ್ಲಿ ಪ್ರಾರಂಭಿಸಲಾಗಿದೆ. ಹನ್ನೊಂದು ವರ್ಷಗಳಲ್ಲಿ ಭಾರತದ ಕೃಷಿ ರಫ್ತು ಪ್ರಮಾಣ ಬಹುತೇಕ ದ್ವಿಗುಣಗೊಂಡಿದೆ ಮತ್ತು ಆಹಾರ ಧಾನ್ಯಗಳ ಉತ್ಪಾದನೆಯು ಸುಮಾರು ೯೦ ದಶಲಕ್ಷ ಮೆಟ್ರಿಕ್ ಟನ್‌ಗಳಷ್ಟು ಹೆಚ್ಚಾಗಿದೆ; ಹಣ್ಣು ಮತ್ತು ತರಕಾರಿ ಇಳುವರಿ ೬೪೦ ಲಕ್ಷ ಮೆಟ್ರಿಕ್ ಟನ್‌ಗಳಿಗಿಂತ ಹೆಚ್ಚು ಹೆಚ್ಚಾಗಿದೆ ಎಂದು ಅಂಕಿಅಂಶ ನೀಡಿದರು.

ಧ್ವನಿ:ಪ್ರಧಾನಿ ನರೇಂದ್ರ ಮೋದಿ

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾತನಾಡಿ, ಭವಿಷ್ಯದ ಜಿಎಸ್‌ಟಿ ಸುಧಾರಣೆಯಡಿಯಲ್ಲಿ ಕೃಷಿ ಉಪಕರಣಗಳ ಮೇಲಿನ ಜಿಎಸ್‌ಟಿ ದರಗಳನ್ನು ಕಡಿಮೆ ಮಾಡುವ ಮೂಲಕ ಸರ್ಕಾರ ರೈತರಿಗೆ ಅನುಕೂಲ ಮಾಡಿದೆ ಎಂದು ಹೇಳಿದರು. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಅಡಿಯಲ್ಲಿ, ಈವರೆಗೆ ೩ ಲಕ್ಷದ ೯೦ ಸಾವಿರ ಕೋಟಿ ರೂಪಾಯಿಗಳನ್ನು ನೇರ ನಗದು ವರ್ಗಾವಣೆಯ ಮೂಲಕ ಅರ್ಹ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

><><><><><

ಭವಿಷ್ಯವನ್ನು ಸಾಮೂಹಿಕವಾಗಿ ರೂಪಿಸುವ ತಂತ್ರಜ್ಞಾನಗಳನ್ನು ನಿರ್ಮಿಸಲು ಭಾರತ ಅನನ್ಯ ಪ್ರತಿಭೆಯನ್ನು ಹೊಂದಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಕ್ವಾಲ್ಕಾಮ್‌ನ ಅಧ್ಯಕ್ಷ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕ್ರಿಸ್ಟಿಯಾನೊ ಆರ್ ಅಮೋನ್ ಅವರನ್ನು ಪ್ರಧಾನಮಂತ್ರಿ ಭೇಟಿಯಾದರು. ಕೃತಕ ಬುದ್ಧಿಮತ್ತೆ, ನಾವಿನ್ಯತೆ ಮತ್ತು ಕೌಶಲ್ಯದಲ್ಲಿ ಭಾರತದ ಪ್ರಗತಿಯ ಕುರಿತು ಉಭಯರು ಚರ್ಚಿಸಿದರು. ಭಾರತದ ಸೆಮಿಕಂಡಕ್ಟರ್ ಮತ್ತು ಎಐ ಕಾರ್ಯಾಚರಣೆಗಳ ಬಗ್ಗೆ ಕ್ವಾಲ್ಕಾಮ್‌ನ ಬದ್ಧತೆಗೆ ಪ್ರಧಾನಮಂತ್ರಿ ಮೋದಿ ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

><><><><><

ಅಮೆರಿಕದ ಭಾರತ ನಿಯೋಜಿತ ರಾಯಭಾರಿ ಸರ್ಗೋಯ್ ಗೋರ್ ಅವರನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ನವದೆಹಲಿಯಲ್ಲಿ ಭೇಟಿ ಮಾಡಿ, ಅವರ

ಹೊಸ ಜವಾಬ್ದಾರಿಗೆ ಶುಭ ಹಾರೈಸಿದರು. ಭಾರತ - ಅಮೆರಿಕ ಬಾಂಧವ್ಯ ಮತ್ತು ಅದರ ಜಾಗತಿಕ ಮಹತ್ವದ ಬಗ್ಗೆ ಚರ್ಚಿಸಿದ್ದಾಗಿ ಜೈಶಂಕರ್ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ತಿಳಿಸಿದ್ದಾರೆ. ಸರ್ಗೋಯ್ ಗೋರ್ ಅವರು ವಿದೇಶಾಂಗ ಕಾರ್ಯದರ್ಶಿ ವಿಶ್ರಂ ಮಿಸ್ರಿ ಅವರನ್ನೂ ಭೇಟಿಯಾದರು. ಭಾರತ-ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆ ಮತ್ತು ಅದರ ಹಂಚಿತ ಆದ್ಯತೆಗಳ ಬಗ್ಗೆ ಫಲಪ್ರದ ಮಾತುಕತೆ ನಡೆಯಿತು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

><><><><

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಬಿಹಾರದ ಸರಣ್ ಜಿಲ್ಲೆಯಲ್ಲಿರುವ ಲೋಕನಾಯಕ ಜಯಪ್ರಕಾಶ ನಾರಾಯಣ್ ಅವರ ಪೂರ್ವಜರ ಗ್ರಾಮವಾದ ಸಿತಾಬ್ ದಿಯಾರಾಗೆ ಭೇಟಿ ನೀಡಿದರು. ಸಂಪೂರ್ಣ ಕ್ರಾಂತಿ ಚಳವಳಿಯ ಮಹಾನ್ ನೇತರರಾದ ಜಯಪ್ರಕಾಶ ನಾರಾಯಣ್ ಅವರ ೧೨೩ನೇ ಜನ್ಮದಿನದ ಅಂಗವಾಗಿ ಅವರಿಗೆ ಗೌರವ ನಮನ ಸಲ್ಲಿಸಿದರು. ಹಿರಿಯ ಸ್ವಾತಂತ್ರ್ಯ ಹೋರಾಟಗಾರರ ಸ್ಮರಣಾರ್ಥ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಅವರು, ಲಾಲಾ ತೋಲಾದಲ್ಲಿನ ಜಯಪ್ರಭಾ ಸ್ಮೃತಿ ಭವನದ ವಸ್ತುಪ್ರದರ್ಶನ ಕೇಂದ್ರಕ್ಕೂ ಭೇಟಿ ನೀಡಿದರು. ಜಯಪ್ರಕಾಶ ನಾರಾಯಣ ಅವರ ಪತ್ನಿಯ ಸ್ಮರಣಾರ್ಥ ಹೆಸರಿಸಿರುವ ಪ್ರಭಾವತಿ ಸ್ಮಾರಕ ಗ್ರಂಥಾಲಯಕ್ಕೂ ಉಪರಾಷ್ಟ್ರಪತಿ ಭೇಟಿ ನೀಡಿದರು.

><><><><

ಕರ್ನಾಟಕದಲ್ಲಿ ಸಚಿವ ಸಂಪುಟ ವಿಸ್ತರಣೆಯ ಯಾವುದೇ ಪ್ರಸ್ತಾಪವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನ ಲಾಲ್‌ಬಾಗ್‌ನಲ್ಲಿಂದು

ಬೆಂಗಳೂರು ನಡಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಹೈಕಮಾಂಡ್ ನಿರ್ಧಾರವೇ ಅಂತಿಮವಾಗಿದ್ದು, ಗಾಳಿ ಸುದ್ದಿಗೆ ಕಿವಿಗೊಡದಂತೆ ಹೇಳಿದರು. ಈ ವೇಳೆ ಅವರು ನಾಗರಿಕರ ಸಮಸ್ಯೆ ಆಲಿಸಿದರು ಹಾಗೂ ಸಲಹೆಗಳನ್ನು ಸ್ವೀಕರಿಸಿದರು. ಲಾಲ್‌ಬಾಗ್ ಉಳಿವಿಗೆ ಎಲ್ಲಾ ರೀತಿಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

><><><><

ಬಿಹಾರ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಸೀಟು ಹಂಚಿಕೆ ಸಂಬಂಧ ಎನ್‌ಡಿಎ ಮತ್ತು ಮಿತ್ರ ಪಕ್ಷಗಳ ನಡುವಿನ ಮಾತುಕತೆ ಇಂದೂ ಮುಂದುವರಿದಿತ್ತು. ಕೇಂದ್ರ ಸಚಿವ ಮತ್ತು ಹಿಂದೂಸ್ತಾನಿ ಆವಾಂ ಮೋರ್ಚಾ ಮುಖ್ಯಸ್ಥ ಜಿತನ್ ರಾಮ್ ಮಾಂಝಿ, ರಾಷ್ಟ್ರೀಯ ಲೋಕ್ ಮೋರ್ಚಾ ಅಧ್ಯಕ್ಷ ಉಪೇಂದ್ರ ಕುಶ್ವಾಹಾ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಚರ್ಚೆ ನಡೆಸಿದರು. ಜೆ.ಪಿ.ನಡ್ಡಾ ನಿವಾಸದಲ್ಲಿ ಬಿಜೆಪಿ ಕೋರ್ ಕಮಿಟಿ ಸಭೆ ಕೂಡ ನಡೆದಿದ್ದು ಕೇಂದ್ರ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಸೇರಿದಂತೆ ಪಕ್ಷದ ನಾಯಕರು ಪಾಲ್ಗೊಂಡಿದ್ದರು.

><><><><

ಆಧಾರ್ ಆಧಾರಿತ ಡಿಜಿಟಲ್ ಗುರುತಿನ ವ್ಯವಸ್ಥೆ ಮತ್ತು ಪಿಎಂ ಗತಿ ಶಕ್ತಿ ರಾಷ್ಟ್ರೀಯ ಯೋಜನೆಯು ಸೇವಾ ವಿಲೇವಾರಿ ವ್ಯವಸ್ಥೆಯನ್ನು ರೂಪಾಂತರಗೊಳಿಸಿದೆ ಎಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆಯಲ್ಲಿ ಭಾರತೀಯ ತಾಂತ್ರಿಕ ಮತ್ತು ಆರ್ಥಿಕ ಸಹಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,

ಪಾರದರ್ಶಕತೆ ಮತ್ತು ಬದ್ಧತೆಯನ್ನು ಉತ್ತೇಜಿಸುವಲ್ಲಿ ತಂತ್ರಜ್ಞಾನವು ಸುಲಭ ಮತ್ತು ಪರಿಣಾಮಕಾರಿ ಸಾಧನವಾಗಿದೆ ಎಂದರು.

><><><><

ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ೨೦೨೫ರ ಪದಕ ವಿಜೇತರನ್ನು ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ನವದೆಹಲಿಯಲ್ಲಿಂದು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕ್ರೀಡಾಪಟುಗಳ ಅದಮ್ಯ ಉತ್ಸಾಹ, ಬದ್ಧತೆ ಮತ್ತು ದಾಖಲೆಯ ಪ್ರದರ್ಶನ ದೇಶಕ್ಕೆ ಹೆಮ್ಮೆ ತಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಇವರು ದಿವ್ಯಾಂಗರಿಗೆ ಪ್ರೇರಣಾದಾಯಕ ಸಂದೇಶ ರವಾನಿಸಿದ್ದಾರೆ ಎಂದು ಹೇಳಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮುನ್ನೋಟವನ್ನು ಕ್ರೀಡಾಪಟುಗಳು ಅತಿಸೂಕ್ತವಾಗಿ ಎತ್ತಿ ಹಿಡಿದಿದ್ದಾರೆ ಎಂದರು. ನವದೆಹಲಿಯಲ್ಲಿ ನಡೆದ ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ನಲ್ಲಿ ೬ ಚಿನ್ನ, ೯ ಬೆಳ್ಳಿ ಮತ್ತು ೭ ಕಂಚಿನ ಪದಕಗಳು ಸೇರಿ ಒಟ್ಟು ೨೨ ಪದಕಗಳೊಂದಿಗೆ ೧೦ನೇ ಸ್ಥಾನದಲ್ಲಿ ಭಾರತ ಅತ್ಯುತ್ತಮ ಪ್ರದರ್ಶನ ತೋರಿದೆ.

><><><><

ಮಲೇಷ್ಯಾದಲ್ಲಿ ನಡೆಯುತ್ತಿರುವ ಜೋಹರ್ ಕಪ್ ಹಾಕಿ ಪಂದ್ಯಾವಳಿಯಲ್ಲಿ ಭಾರತ ಜೂನಿಯರ್ ಪುರುಷರ ತಂಡವು ಹಾಲಿ ಚಾಂಪಿಯನ್ ಬ್ರಿಟನ್ ವಿರುದ್ಧ ೩-೨ ರ ಗೆಲುವಿನೊಂದಿಗೆ ಅಭಿಯಾನ ಆರಂಭಿಸಿದೆ. ಭಾರತದ ಪರ ಕ್ಯಾಪ್ಟನ್ ರೋಹಿತ್ ಎರಡು ಗೋಲ್ ಹಾಗೂ ರವ್‌ನೀತ್ ಸಿಂಗ್ ಒಂದು ಗೋಲು ಗಳಿಸಿದರು.

><><><><

ಶ್ರೀಲಂಕಾದ ಕೊಲಂಬೋದಲ್ಲಿ ನಡೆಯುತ್ತಿರುವ ಐಸಿಸಿ ಮಹಿಳೆಯರ ಏಕ ದಿನ ಕ್ರಿಕೆಟ್ ವಿಶ್ವಕಪ್ ಪಂದ್ಯದಲ್ಲಿ ಶ್ರೀಂಕಾ ವಿರುದ ಟಾಸ್ ಸೋತು ಮೊದಲು ಬ್ಯಾಟ್ ಮಾಡಿರವ ಇಂಗ್ಲೆಂಡ ತಂಡ ನಿಗದಿತ ೫೦ ಓವರ್ ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೫೩ ರನ್ ಗಳಿಸಿ ಆಡುತ್ತಿದೆ.

><><><><

ನವದೆಹಲಿಯಲ್ಲಿ ನಡೆಯುತ್ತಿರುವ ಭಾರತ - ವೆಸ್ಟ್ ಇಂಡೀಸ್ ನಡುವಣ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ೫ ವಿಕೆಟ್ ನಷ್ಟಕ್ಕೆ ೫೧೮ ರನ್ ಗಳಿಸಿ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿದೆ. ವೆಸ್ಟ್ ಇಂಡೀಸ್ ತಂಡ ಮೊದಲ ಇನ್ನಿಂಗ್ಸ್ ನ ಎರಡನೇ ದಿನದಾಟದಲ್ಲಿಂದು ೪ ವಿಕೆಟ್ ನಷ್ಟಕ್ಕೆ ೧೪೦ ರನ್ ಗಳಿಸಿದೆ. ಯಶಸ್ವಿ ಜೈಸ್ವಾಲ್ ೧೭೫ ರನ್ ಗಳಿಸಿದರೆ, ಶುಭಮನ್ ಗಿಲ್ ಅಜೇಯ ೧೨೯ ರನ್ ಗಳಿಸಿದ್ದಾರೆ.

><><>END<><><